ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

2

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE: 19/4/21



## ಆಸ್ಪತ್ರೆಯಿಂದಲೇ ಕಾರ್ಯಭಾರ

ಕರೊನಾ ಸೋಂಕಿನಿಂದ ಮಣಿಪಾಲ್ ಆಸ್ಪತ್ರೆಗೆ
ದಾಖಲಾಗಿರುವ ಮುಖ್ಯಮಂತ್ರಿ ಬಿ.ಎಸ್.
ಯಡಿಯೂರಪ್ಪ ಆರೋಗ್ಯ ಸ್ಥಿರವಾಗಿದ್ದು, ಅವರು
ಅಲ್ಲಿಂದಲೇ ದೈನಂದಿನ ಆಡಳಿತ ನಿಭಾಯಿಸುತ್ತಿದ್ದಾರೆ.
ಬೆಳಗ್ಗೆ ದಿನಪತ್ರಿಕೆಗಳ ಮೇಲೆ ಕಣ್ಣಾಡಿಸುವ ಸಿಎಂ, ಕೆಲ ಸಂಬಂಧಿಸಿದ
ವಿಷಯಗಳ ಬಗ್ಗೆ ಕೂಡಲೇ ಫೋನ್ ಮಾಡಿ ಅಧಿಕಾರಿಗಳಿಗೆ ನಿರ್ದೇಶನ
ನೀಡುತ್ತಿದ್ದಾರೆ. ವಿಶೇಷವಾಗಿ ಕರೊನಾಗೆ ಸಂಬಂಧಿಸಿದ ಯಾವುದೇ
ವಿಷಯಗಳನ್ನು ಪೆಂಡಿಂಗ್ ಇಡಬೇಡಿ. ನನ್ನ ಪೂರ್ವಾನುಮತಿ ಇದೆ
ಎಂದು ಕೆಲಸ ಮಾಡುವಂತೆ ರಾಜ್ಯದ ಮುಖ್ಯ ಕಾರ್ಯದರ್ಶಿಗಳಿಗೂ
ಸೂಚಿಸಿದ್ದಾರೆ. ರಾಜ್ಯದಲ್ಲಿ ಬೇಸಿಗೆ ಸಂದರ್ಭದಲ್ಲಿ ಕುಡಿಯುವ ನೀರಿನ
ಸಮಸ್ಯೆ ಆಗದಂತೆ ಈಗಿನಿಂದಲೇ ಕ್ರಮ ಕೈಗೊಳ್ಳಿರಿ. ಅತಿ ಜರೂರು ಕಡತ
ಗಳನ್ನು ಆಸ್ಪತ್ರೆಗೆ ಕಳುಹಿಸಿ ಒಪ್ಪಿಗೆ ಪಡೆಯಲು ತಿಳಿಸಿದ್ದಾರೆ. ಆಸ್ಪತ್ರೆಯಿಂದ
ಬಿಡುಗಡೆಯಾದ ಬಳಿಕ ಸರ್ವಪಕ್ಷಗಳ ಸಭೆ ಕರೆಯುವ ಬಗ್ಗೆ ಪ್ಲ್ಯಾನ್
ಮಾಡೋಣವೆಂಬ ಸಲಹೆ ನೀಡಿದ್ದಾರೆ ಎಂದು ಮೂಲಗಳು ಖಚಿತಪಡಿಸಿವೆ.